# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ, ಬೆಂಗಳೂರು

---

ಸಂ: ಸ.ಅ/ವಾ-181/ಪಿ.ಆರ್/181/2022-23 ದಿನಾಂಕ : 21-05-2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :21-05-2022 ರಂದು ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :21-05-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಶೆರಗಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ರಾಘವೇಂದ್ರ.ಟಿ, ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ. ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ವಾಸವಿ ಆಸ್ಪತ್ರೆ ಬಳಿ ಇರುವ 4ನೇ ಅಡ್ಡರಸ್ತೆಯಲ್ಲಿ ರಸ್ತೆ ಗುಂಡಿಗಳಾಗಿದ್ದು, ಅವುಗಳನ್ನು ಮುಚ್ಚಲು ಕ್ರಮ ವಹಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

2) ಕುಮಾರಸ್ವಾಮಿ ಬಡಾವಣೆಯ ವಾಟರ್ ಟ್ಯಾಂಕ್ ಹತ್ತಿರ 34ನೇ ಅಡ್ಡರಸ್ತೆಯಲ್ಲಿ ಜಿಯೋ ಸಂಸ್ಥೆಯವರು ಓ.ಎಫ್.ಸಿ ಕೇಬಲ್ ಅಳವಡಿಸಲು ಅಗೆದಿರುವ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸುವಂತೆ ಸಭೆಯಲ್ಲಿ ಸೂಚಿಸಲಾಗಿರುತ್ತದೆ..

3) ಬೆಸ್ಕಾಂ ಇಲಾಖೆಯಿಂದ ಕೊಂಬೆಗಳನ್ನು ಕತ್ತರಿಸಲಾಗಿದ್ದು, ಅವುಗಳನ್ನು ತೆರವುಗೊಳಿಸಲು ಸಭೆಯಲ್ಲಿ ಸೂಚಿಸಲಾಗಿರುತ್ತದೆ.

4) ವಾರ್ಡ್‌ನ ಪ್ರದೇಶದಲ್ಲಿ ಘನತ್ಯಾಜ್ಯವನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿರುತ್ತಾರೆ.

5) ಸಹಾಯಕ ಅಭಿಯಂತರರಿಗೆ ಮಳೆ ಕಡಿಮೆ ಆದ ನಂತರ ರಸ್ತೆಗುಂಡಿಗಳನ್ನು ಮುಚ್ಚುವಂತೆ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

6) ವಾರ್ಡ್ ಪ್ರದೇಶದಲ್ಲಿ ಅಪಾರ ಮಳೆಯಾಗಿದ್ದು, ಅಲಲ್ಲಿ ಮ್ಯಾನ್‌ಹೋಲ್‌ಗಳ ಸುತ್ತ ಸೋರಿಕೆ ಕಂಡುಬಂದಿದ್ದು, ಅವುಗಳನ್ನು ಸರಿಪಡಿಸುವಂತೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

7) ಸಾಗರ್ ಆಸ್ಪತ್ರೆ ಎದುರು ಮರದ ಕೊಂಬೆಗಳು ಬೀಳುವ ಹಂತದಲ್ಲಿ ಸದರಿ ಕೊಂಬೆಗಳನ್ನು ಕತ್ತರಿಸಿಕೊಡಬೇಕೆಂದು ಸಂಚಾರ ಪೊಲೀಸ್ ಠಾಣೆ ರವರು ಕೋರಿರುತ್ತಾರೆ.

Scanned by CamScanner

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.

ಪ್ರತಿಯನ್ನು,

1) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ-ಎಸ್-5 ಉಪ ವಿಭಾಗ
2) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಉಪ ವಿಭಾಗ
3) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ಪದ್ಮನಾಭನಗರ ವಿಭಾಗ
4) ಅರಣ್ಯ ಸಂರಕ್ಷಣಾಧಿಕಾರಿಗಳು, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ

Scanned by CamScanner